# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ | 355 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 07.12.2023 |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ವಿಜಯಪುರ ಜಿಲ್ಲೆಯಾದ್ಯಂತ ಎಂ.ಎಸ್.ಐ.ಎಲ್ ಅಡಿಯಲ್ಲಿ ಎಷ್ಟು ಲೈಸೆನ್ಸ್ ನೀಡಲಾಗಿದೆ; (ವಿವರ ನೀಡುವುದು)</td><td>ವಿಜಯಪುರ ಜಿಲ್ಲೆಯಾದ್ಯಂತ ಎಂ.ಎಸ್.ಐ.ಎಲ್ ಸಂಸ್ಥೆಗೆ 42 ಸಿಎಲ್–11ಸಿ ಸನ್ನದುಗಳನ್ನು ತೆರೆಯಲು ಅನುಮತಿ ನೀಡಲಾಗಿದ್ದು, ವಿವರಗಳು ಕೆಳಕಂಡಂತಿದೆ.
<table>
<tr><th>ಕ್ರ ಸಂ.</th><th>ತಾಲ್ಲೂಕು</th><th>ಲೈಸೆನ್ಸ್ ನೀಡಲಾಗಿರುವ ಸಂಖ್ಯೆ</th></tr>
<tr><td>1</td><td>ಇಂಡಿ</td><td>9</td></tr>
<tr><td>2</td><td>ಬಸವನಬಾಗೇವಾಡಿ</td><td>8</td></tr>
<tr><td>3</td><td>ವಿಜಯಪುರ</td><td>12</td></tr>
<tr><td>4</td><td>ಮುದ್ದೇಬಿಹಾಳ</td><td>6</td></tr>
<tr><td>5</td><td>ಸಿಂದಗಿ</td><td>7</td></tr>
<tr><td colspan="2">ಒಟ್ಟು</td><td>42</td></tr>
</table></td></tr>
<tr><td>ಆ)</td><td>ಯಾವ ಆಧಾರದ ಮೇಲೆ ಎಂ.ಎಸ್.ಐ.ಎಲ್ ಗೆ ಪರವಾನಿಗೆ ನೀಡಲಾಗಿದೆ;</td><td>ಎಂ.ಎಸ್.ಐ.ಎಲ್ ಮದ್ಯದ ಮಳಿಗೆಗಳನ್ನು ಮಂಜೂರು ಮಾಡಲು ಸರ್ಕಾರ ಅನುಸರಿಸುವ ಮಾರ್ಗಸೂಚಿಗಳು ಕೆಳಕಂಡಂತಿದೆ.<br><br>ಸರ್ಕಾರದ ಪತ್ರ ಸಂಖ್ಯೆ: ಆಇ 07 ಇಎಫ್‌ಎಲ್ 2008 ದಿನಾಂಕ: 03.07.2009 ರಲ್ಲಿ ಪ್ರತಿ ತಾಲ್ಲೂಕಿಗೆ ಕನಿಷ್ಟ 2 ಸನ್ನದುಗಳಂತೆ 352 ಸನ್ನದುಗಳು, ಜಿಲ್ಲಾ ಕೇಂದ್ರಸ್ಥಾನಕ್ಕೆ 2 ರಂತೆ 58 ಸನ್ನದುಗಳು ಹಾಗೂ ಎಂಎಸ್‌ಐಎಲ್ ಸಂಸ್ಥೆ ಪ್ರಾದೇಶಿಕ ಬೇಡಿಕೆ ಅಧ್ಯಯನ ಆಧರಿಸಿ ಕೋರಿಕೆ ಸಲ್ಲಿಸುವ ಸ್ಥಳಗಳಿಗೆ 53 ಸನ್ನದುಗಳಂತೆ ಒಟ್ಟು 463 ಸನ್ನದುಗಳನ್ನು ಹಂಚಿಕೆ ಮಾಡಲಾಗಿದೆ.<br><br>ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ: ಆಇ 15 ಇಎಫ್‌ಎಲ್ 2015 ದಿ:23.09.2016 ರಲ್ಲಿ ರಾಜ್ಯದ 220 ವಿಧಾನ ಸಭಾ</td></tr>
</table>

| | | |
|---|---|---|
| | | ಕ್ಷೇತ್ರಗಳಿಗೆ ಪ್ರತಿ ಕ್ಷೇತ್ರಕ್ಕೆ 4 ಸನ್ನದುಗಳಂತೆ ಒಟ್ಟು 880, ಯಾದಗಿರಿ ಜಿಲ್ಲೆಯ 04 ವಿಧಾನ ಸಭಾ ಕ್ಷೇತ್ರಗಳಿಗೆ ತಲಾ 5 ರಂತೆ ಒಟ್ಟು 20, ಹೀಗೆ ರಾಜ್ಯದಲ್ಲಿ ಒಟ್ಟಾರೆ 900 ಸಿಎಲ್ 11–ಸಿ ಸನ್ನದುಗಳನ್ನು ಎಂ.ಎಸ್.ಐ.ಎಲ್ ಸಂಸ್ಥೆಗೆ ಮಂಜೂರಾತಿ ನೀಡಲು ಸರ್ಕಾರವು ಅನುಮತಿ ನೀಡಿರುತ್ತದೆ.<br><br>ಎಂ.ಎಸ್.ಐ.ಎಲ್ ಮಳಿಗೆಗಳನ್ನು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು, 1968ರ ನಿಯಮ–3(11–ಸಿ), 8, 8(ಎ) ರಲ್ಲಿ ನಿಗದಿಪಡಿಸಿರುವ ಸನ್ನದು ಶುಲ್ಕ ಮತ್ತು ಹೆಚ್ಚುವರಿ ಸನ್ನದು ಶುಲ್ಕ ಹಾಗೂ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5ರನ್ವಯ ಆಕ್ಷೇಪಣಾ ರಹಿತ ಸ್ಥಳಕ್ಕೆ ಸನ್ನದನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಎಂ.ಎಸ್.ಐ.ಎಲ್.ಗೆ ನೀಡುತ್ತಿರುವ ಪರವಾನಿಗೆಗಳಿಂದ ರಾಜ್ಯದ ಬೊಕ್ಕಸಕ್ಕೆ ಬರುತ್ತಿರುವ ಹಣ ಎಷ್ಟು; (ವಿವರ ನೀಡುವುದು) | 2023–24ನೇ ಸಾಲಿನ ಅಬಕಾರಿ ವರ್ಷದಲ್ಲಿ ಅಕ್ಟೋಬರ್ ಅಂತ್ಯಕ್ಕೆ ನವೀಕರಣಗೊಂಡ ಸಿಎಲ್–11ಸಿ (ಎಂ.ಎಸ್.ಐ.ಎಲ್. ಸಂಸ್ಥೆಯ ಮದ್ಯ ಮಾರಾಟ ಮಳಿಗೆಗಳು) ವಾರ್ಷಿಕ ಸನ್ನದು ಶುಲ್ಕ ಮತ್ತು ಹೆಚ್ಚುವರಿ ಸನ್ನದು ಶುಲ್ಕ ದಿಂದ ರೂ.47.79 ಕೋಟಿಗಳಷ್ಟು ಅಬಕಾರಿ ರಾಜಸ್ವ ಸಂಗ್ರಹವಾಗಿರುತ್ತವೆ.<br><br>ಸನ್ನದುಗಳಲ್ಲಿ ಮಾರಾಟ ಮಾಡಲು ಖರೀದಿಸಿರುವ ಮದ್ಯದ ಮೇಲಿನ ಅಬಕಾರಿ ಸುಂಕ ಮತ್ತು ಹೆಚ್ಚುವರಿ ಅಬಕಾರಿ ಸುಂಕಗಳನ್ನು ಮದ್ಯ ಉತ್ಪಾದಕ ಡಿಸ್ಟಿಲರಿ/ಬ್ರಿವರೀಸ್/ ವೈನರಿ ಘಟಕಗಳ ಹಂತದಲ್ಲೇ ಸಂಗ್ರಹಿಸಲಾಗುತ್ತಿದೆ. ಆದುದರಿಂದ, ಸನ್ನದುಗಳಿಂದ ಸನ್ನದು ಶುಲ್ಕ ಮತ್ತು ಹೆಚ್ಚುವರಿ ಸನ್ನದು ಶುಲ್ಕದ ರೂಪದಲ್ಲಿ ಅಬಕಾರಿ ಆದಾಯ ಸಂಗ್ರಹವಾಗುತ್ತಿದೆ. ಜಿಲ್ಲಾವಾರು ಅಂಕಿ ಅಂಶಗಳನ್ನು **ಅನುಬಂಧದಲ್ಲಿ** ಇರಿಸಿದೆ. |

**ಆಇ 67 ಇಎಲ್‌ಕ್ಯೂ 2023**

(ಆರ್.ಬಿ.ತಿಮ್ಮಾಪುರ)

ಅಬಕಾರಿ ಸಚಿವರು